# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 592
2. ಸದಸ್ಯರ ಹೆಸರು : ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ)
3. ಉತ್ತರಿಸುವ ಸಚಿವರು : ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು.
4. ಉತ್ತರಿಸುವ ದಿನಾಂಕ : 14/08/2025.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ನ್ಯಾಷನಲ್ ಲಾ ಕಾಲೇಜು ಬೆಂಗಳೂರಿನಲ್ಲಿ ಕರ್ನಾಟಕ ಕೋಟಾದಡಿ ಪ್ರವೇಶ ಪಡೆಯಲು 10 ವರ್ಷಗಳವರೆಗೆ ಕರ್ನಾಟಕದಲ್ಲಿ ಅಧ್ಯಯನ ಮಾಡಿರಬೇಕೆಂಬ ನಿಯಮವಿರುವುದು ನಿಜವೇ? | ಹೌದು |
| ಆ) | ರಾಜ್ಯದ ಸಿಇಟಿ ಮೂಲಕ ವೃತ್ತಿಪರ ಕೋರ್ಸ್‌ಗಳಾದ ಇಂಜಿನಿಯರಿಂಗ್ ಪ್ರವೇಶ ಪಡೆಯಲು ಕರ್ನಾಟಕದಲ್ಲಿ ಏಳು ವರ್ಷ ಅಧ್ಯಯನ ಮಾಡಿರಬೇಕೆಂಬ ನಿಯಮ ಜಾರಿಯಲ್ಲಿರುವುದು ಈ ಹಿನ್ನೆಲೆಯಲ್ಲಿ ಕಾನೂನು ಶಾಸ್ತ್ರ ಅಧ್ಯಯನ ಕೂಡ ಒಂದು ವೃತ್ತಿಪರ ಕೋರ್ಸ್ ಆಗಿರುವುದರಿಂದ ಮತ್ತು ಕರ್ನಾಟಕ ಮಕ್ಕಳ ಹಿತ ಕಾಪಾಡಲು ಕರ್ನಾಟಕ ಕೋಟಾದಡಿ ಸೀಟನ್ನು ಪಡೆದುಕೊಳ್ಳಲು ಏಕರೂಪದ ಡೊಮಾಸೈಲ್ (Domicile) ಅವಧಿ (7 ವರ್ಷ) ನಿಗದಿಪಡಿಸುವ ಬಗ್ಗೆ ಸರ್ಕಾರ ಕ್ರಮಕೈಗೊಳ್ಳಲು ಮುಂದಾಗುವುದೇ? | ಇಂಜಿನಿಯರಿಂಗ್ ಕೋರ್ಸ್‌ಗಳಂತೆ ಕರ್ನಾಟಕ ಕೋಟಾದಡಿ ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಯೂನಿವರ್ಸಿಟಿ, ಬೆಂಗಳೂರು ಇಲ್ಲಿ ಪ್ರವೇಶಕ್ಕೆ 7 ವರ್ಷಗಳನ್ನು ನಿಗದಿಪಡಿಸಿ ಕರ್ನಾಟಕದ ವಿದ್ಯಾರ್ಥಿಗಳಿಗೆ ನ್ಯಾಯ ಒದಗಿಸುವ ಪ್ರಸ್ತಾವನೆಯು ಸರ್ಕಾರದಲ್ಲಿ ಸ್ವೀಕೃತವಾಗಿದ್ದು, ಸದರಿ ಮನವಿಯ ಕುರಿತು ಪರಿಶೀಲಿಸಿ, ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ದಿನಾಂಕ: 12.06.2025ರ ಪತ್ರದಲ್ಲಿ ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಯೂನಿವರ್ಸಿಟಿ ಇವರನ್ನು ಕೋರಲಾಗಿತ್ತು.<br><br>ಈ ಸಂಬಂಧ ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಯೂನಿವರ್ಸಿಟಿ ಇವರ ದಿನಾಂಕ: 14.06.2025ರ ಪತ್ರದಲ್ಲಿ ಸದರಿ ಪ್ರಸ್ತಾವನೆಯ ಕುರಿತು National Law School of India Act, 1986 ರನ್ವಯ ನಿಯಮಗಳು, ನಿಬಂಧನೆಗಳು ಹಾಗೂ ಪರಿಣಾಮಗಳನ್ನು ಪರಿಶೀಲಿಸಲು ಹೆಚ್ಚುವರಿ ಸಮಯಾವಕಾಶವನ್ನು ನೀಡುವಂತೆ ಕೋರಿರುತ್ತಾರೆ. ಆದುದರಿಂದ, ಈ ಕುರಿತು ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಯೂನಿವರ್ಸಿಟಿ ಇವರಿಂದ ವರದಿ ಸ್ವೀಕೃತವಾದ ನಂತರ ಸರ್ಕಾರದ ಹಂತದಲ್ಲಿ ಪರಿಶೀಲಿಸಲಾಗುವುದು. |

ಸಂಖ್ಯೆ: ಲಾ-ಹೆಚ್‌ಆರ್‌ಎಮ್/120/2025

(ಎಚ್.ಕೆ. ಪಾಟೀಲ)
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು, ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು